# ಸಹಾಯಕ ಆಯುಕ್ತರವರ ನ್ಯಾಯಾಲಯ, ಹೊಸಪೇಟೆ

ಎ.ವಿಲೇ.ನಂ.ಕಂ.ಪಹಣಿ.ಅಪೀಲು:24/2012-13 ದಿನಾಂಕ:07.06.2016.

**ಉಪಸ್ಥಿತರು: ಅವಿನಾಶ್ ಮೆನನ್ ರಾಜೇಂದ್ರನ್, ಭಾ.ಆ.ಸೇ**

**ಸಹಾಯಕ ಆಯುಕ್ತರು, ಹೊಸಪೇಟೆ**

**ವಾದಿಗಳು: ಶ್ರೀ/ ಶ್ರೀಮತಿ**

1. ಎ.ಪೊಂಪಣ್ಣ ತಂದೆ ಎ.ರುದ್ರಮುನಿಯಪ್ಪ,
2. ನೀಲಮ್ಮ ಗಂಡ ದಿ॥ ಚನ್ನವೀರಪ್ಪ,

**ಉಭಯರ ವಾಸ:** ಎಂ.ಬಿ.ಅಯ್ಯನಹಳ್ಳಿ ಗ್ರಾಮ, ಕೂಡ್ಲಿಗಿ ತಾಲೂಕು, ಬಳ್ಳಾರಿ ಜಿಲ್ಲೆ.

**[ಶ್ರೀ ಎಲ್.ಎಸ್.ಬಷೀರ್ ಅಹ್ಮದ್, ವಕೀಲರು, ಕೂಡ್ಲಿಗಿ]**

**ಪ್ರತಿವಾದಿಗಳು: ಶ್ರೀ/ ಶ್ರೀಮತಿ**

1. ದಾಸರ ಹನ್ಮಂತಪ್ಪ ತಂದೆ ಲೇಟ್ ಬಸಮ್ಮ,
2. ದಾಸರ ಬಸಮ್ಮ ಗಂಡ ದಿ॥ ದೇವಪುತ್ರಪ್ಪ,

**ವಾಸ:** ಎಂ.ಬಿ.ಅಯ್ಯನಹಳ್ಳಿ ಗ್ರಾಮ, ಕೂಡ್ಲಿಗಿ ತಾಲೂಕು, ಬಳ್ಳಾರಿ ಜಿಲ್ಲೆ.

**[ಪ್ರತಿವಾದಿ-1 & 2 ರ ಪರ ವಕೀಲರು, ಶ್ರೀ ಹೆಚ್.ಬಿಡ್ಡಪ್ಪ, ವಕೀಲರು, ಹೊಸಪೇಟೆ ]**

********

**ವ್ಯಾಜ್ಯದ ಜಮೀನು:**

| ತಾಲೂಕು | ಹೋಬಳಿ | ಗ್ರಾಮ | ಸ.ನಂ. | ವಿಸ್ತೀರ್ಣ |
|---|---|---|---|---|
| ಕೂಡ್ಲಿಗಿ | ಹೊಸಹಳ್ಳಿ | ಬೆಳ್ಳಿಕಟ್ಟೆ | 568/ಎ | 02 ಎಕರೆ 11 ಸೆಂಟ್ಸ್ |

**ಪೀಠಿಕೆ:**

ಕೂಡ್ಲಿಗಿ ತಾಲೂಕು ಹೊಸಹಳ್ಳಿ ಹೋಬಳಿ ಬೆಳ್ಳಿಕಟ್ಟೆ ಗ್ರಾಮದ ಸ.ನಂ.568/ಎ ವಿಸ್ತೀರ್ಣ:02 ಎಕರೆ 11 ಸೆಂಟ್ಸ್; ವಿವಾದಾಸ್ಪದ ಜಮೀನಿಗೆ ಸಂಬಂಧಿಸಿದಂತೆ ಕಂದಾಯ ನಿರೀಕ್ಷಕರು, ಹೊಸಹಳ್ಳಿ ಇವರ ಹಕ್ಕು ಬದಲಾವಣೆ ಆದೇಶ ಸಂಖ್ಯೆ:ಎಂ.ಆರ್.ನಂ.:ಹೆಚ್.62/2011-12 ದಿನಾಂಕ:16.03.2012 ವನ್ನು ಪ್ರಶ್ನಿಸಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136[2] ರಡಿಯಲ್ಲಿ ಮೇಲ್ಮನವಿಯನ್ನು ವಾದಿಗಳು ದಿನಾಂಕ:15.05.2012 ರಂದು ಸಲ್ಲಿಸಿರುತ್ತಾರೆ.

ವಾದಿಗಳ ಪರ ವಕೀಲರು ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಿ, ನೈಸರ್ಗಿಕ ನ್ಯಾಯದ ಹಿತದೃಷ್ಟಿಯಿಂದ ಪ್ರಕರಣದ ವಿಚಾರಣೆಯನ್ನು ದಿನಾಂಕ:24.07.2012 ಕ್ಕೆ ನಿಗಧಿಪಡಿಸಿ ಉಭಯಪಕ್ಷಗಳಿಗೆ ನೋಟೀಸು ಮೂಲಕ ತಿಳಿಸಿ ವಿಚಾರಣೆಯನ್ನು ಪ್ರಾರಂಭಿಸಲಾಯಿತು.

ಆದರೆ ವಿಚಾರಣೆ ಪ್ರಾರಂಭಿಸಿದಾಗಿನಿಂದ ಉಭಯ ಪಕ್ಷಗಾರರು ಸತತವಾಗಿ ಗೈರುಹಾಜರಾಗಿದ್ದು, ಪ್ರಕರಣದಲ್ಲಿ ಆಸಕ್ತಿ ಇಲ್ಲದೇ ಇರುವುದು ಕಂಡುಬಂದಿರುತ್ತದೆ. ಆದುದರಿಂದ, ಪ್ರಕರಣವನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲು ಈ ಕೆಳಕಂಡಂತೆ

## -:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಉಭಯ ಪಕ್ಷಗಾರರು ಸತತವಾಗಿ ಗೈರುಹಾಜರಾಗಿರುವುದರಿಂದ, ಸದರಿ ಅಪೀಲನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲಾಗಿದೆ. (dismissed for default).

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:07.06.2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಿದೆ.

[ಅವಿನಾಶ್ ಮೆನನ್ ರಾಜೇಂದ್ರನ್, ಭಾ.ಆ.ಸೇ]
ಸಹಾಯಕ ಆಯುಕ್ತರು,
ಹೊಸಪೇಟೆ.

ವಾದಿ : ಪ್ರತಿವಾದಿಗಳಿಗೆ

**ಪ್ರತಿಯನ್ನು:** ತಹಶೀಲ್ದಾರರು, ಕೂಡ್ಲಿಗಿ ಇವರಿಗೆ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.